ನಿಮ್ಮ ಮನೆಗಳನ್ನು ಸಮಾಧಿಗಳನ್ನಾಗಿ ಮಾಡಬೇಡಿ. ನಿಶ್ಚಯವಾಗಿಯೂ ಸೂರ ಬಕರ ಪಠಿಸಲಾಗುವ ಮನೆಯಿಂದ ಶೈತಾನನು ಓಡಿ ಹೋಗುತ್ತಾನೆ

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅಲ್ಲಾಹನ ಸಂದೇಶವಾಹಕರು
(ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನಿಮ್ಮ ಮನೆಗಳನ್ನು ಸಮಾಧಿಗಳನ್ನಾಗಿ ಮಾಡಬೇಡಿ. ನಿಶ್ಚಯವಾಗಿಯೂ ಸೂರ ಬಕರ ಪಠಿಸಲಾಗುವ ಮನೆಯಿಂದ ಶೈತಾನನು ಓಡಿ ಹೋಗುತ್ತಾನೆ."
[صحيح] [رواه مسلم]

ಮನೆಗಳಲ್ಲಿ ನಮಾಝ್ ಮಾಡದಿರುವುದನ್ನು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಈ ಹದೀಸಿನಲ್ಲಿ ವಿರೋಧಿಸುತ್ತಾರೆ. ಏಕೆಂದರೆ ಇದರಿಂದ ಮನೆಗಳು ಸಮಾಧಿಸ್ಥಳವಾಗಿ ಮಾರ್ಪಡುತ್ತದೆ. ಸಮಾಧಿಸ್ಥಳವು ನಮಾಝ್ ಮಾಡುವ ಸ್ಥಳವಲ್ಲ. ನಂತರ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಸೂರ ಬಕರ ಪಠಿಸಲಾಗುವ ಮನೆಯಿಂದ ಶೈತಾನನು ಓಡಿ ಹೋಗುತ್ತಾನೆ ಎಂದು ತಿಳಿಸುತ್ತಾರೆ.

http://www.sunnah.global/hadeeth/kn/show/6208